# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಸೋಮವಾರ, ದಿನಾಂಕ: 15ನೇ ಜುಲೈ, 2019**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

### 02. ಕಾರ್ಯದರ್ಶಿಯವರ ವರದಿ

**ಕಾರ್ಯದರ್ಶಿಯವರು: -**

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯಲ್ಲಿ ಮಂಡಿಸುವುದು.

### 03. ಗಮನ ಸೆಳೆಯುವ ಸೂಚನೆಗಳು

ಅ) **ಶ್ರೀ ಪಿ.ಆರ್. ರಮೇಶ್** ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಭೂ ಪರಿವರ್ತನೆಯಾಗದೆ ಅನಧಿಕೃತವಾಗಿ ನಿರ್ಮಿಸಿರುವ ಎಲ್ಲಾ ರೆವಿನ್ಯೂ ನಿವೇಶನಗಳನ್ನು ಕರ್ನಾಟಕ ಲ್ಯಾಂಡ್ ರೆವಿನ್ಯೂ ಕಾಯ್ದೆ ಹಾಗೂ ಕರ್ನಾಟಕ ಕಂಟ್ರಿ ಮತ್ತು ಟೌನ್ ಪ್ಲ್ಯಾನಿಂಗ್ ಕಾಯ್ದೆ ಮತ್ತು ಕೆ.ಎಂ.ಸಿ ಕಾಯ್ದೆಗಳಿಗೆ ತಿದ್ದುಪಡಿ ತಂದು ಸಕ್ರಮಗೊಳಿಸುವ ಬಗ್ಗೆ **ಮಾನ್ಯ ಉಪ ಮುಖ್ಯಮಂತ್ರಿಗಳ** ಗಮನ ಸೆಳೆಯುವುದು.

ಆ) **ಶ್ರೀ ಎನ್. ರವಿಕುಮಾರ್** ಅವರು ಬೆಂಗಳೂರು ನಗರದಲ್ಲಿ ಜಾಹಿರಾತು ಫಲಕಗಳನ್ನು ಅದರ ಸ್ಟ್ರಕ್ಚರ್‌ನೊಂದಿಗೆ ತೆರುವುಗೊಳಸಬೇಕೆಂದು ಮಾನ್ಯ ಉಚ್ಚನ್ಯಾಯಾಲಯದ ಆದೇಶವಿದ್ದರೂ ಅದನ್ನು ಕ್ರಮಬದ್ಧವಾಗಿ ಜಾರಿಗೊಳಸದಿರುವ ಬಗ್ಗೆ **ಮಾನ್ಯ ಉಪ ಮುಖ್ಯಮಂತ್ರಿಗಳ** ಗಮನ ಸೆಳೆಯುವುದು.

....2

**04. ನಿಯಮ 330ರ ಮೇರೆಗೆ**

ಅ) **ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ** ಅವರು ಧಾರವಾಡದ ಎನ್.ಎ. ಮುತ್ತಣ್ಣ ಸ್ಮಾರಕ ಪೋಲೀಸ್ ಮಕ್ಕಳ ವಸತಿ ಶಾಲೆಯು 1997ರಲ್ಲಿ ಪ್ರಾರಂಭವಾಗಿ ಉತ್ತಮ ಫಲಿತಾಂಶವನ್ನು ಪಡೆಯುತ್ತಾ ಬಂದಿದ್ದರೂ ಏಕಾಏಕಿ ಶಾಲೆಯನ್ನು ಮುಚ್ಚಿರುವುದರಿಂದ ಶಿಕ್ಷಕರು ಹಾಗೂ ವಿದ್ಯಾರ್ಥಿಗಳಿಗೆ ತೊಂದರೆ ಉಂಟಾಗಿರುವ ಬಗ್ಗೆ ಪ್ರಸ್ತಾಪಿಸುವುದು.

ಆ) **ಶ್ರೀ ಎಸ್. ಆರ್. ಪಾಟೀಲ್ ಹಾಗೂ ಶ್ರೀ ಬಸವರಾಜ ಪಾಟೀಲ್ ಇಟಗಿ** ಅವರುಗಳು ಕೃಷ್ಣ ಮೇಲ್ದಂಡೆ ಯೋಜನೆಯ ಮೂರನೇ ಹಂತದ ಕಾಮಗಾರಿಯಲ್ಲಿ ಆಲಮಟ್ಟಿ ಜಲಾಶಯವನ್ನು 519.6 ಮೀಟರ್‌ನಿಂದ 524.256 ಮೀಟರ್‌ವರೆಗೆ ಎತ್ತರಿಸುವ ಹಾಗೂ ಸದರಿ ಜಲಾಶಯದ ಹಿನ್ನೀರಿನಲ್ಲಿ ಮುಳುಗಡೆಯಾಗುವ ಗ್ರಾಮಗಳಿಗೆ ಪುನರ್‌ವಸತಿ ಕಲ್ಪಿಸುವ ಬಗ್ಗೆ ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ(ಪ್ರ)**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
**www.kla.kar.nic.in/council.htm**